# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 22.03.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್ ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71, ಸಹಾಯಕ ನಿರ್ದೇಶಕರು (ಪಶುಪಾಲನೆ) |
| 2 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ವೆಂಕಟರಾಜು | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) |
| 4 | ಸುರೇಶ್ ಎಂ | ಕಿರಿಯ ಆರೋಗ್ಯ ಪರಿವೀಕ್ಷಕರು |
| 5 | ಅತಾಉಲ್ಲಾ | ಬೆಸ್ಕಾಂ |

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಡಿ.ಎಸ್.ಮಂಜುನಾಥ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

*****

- ಶ್ರೀ ಬಿ.ಆರ್ ರವಿಕುಮಾರ್, ನೋಡಲ್ ಅಧಿಕಾರಿರವರು ಮಾತನಾಡಿ ಒಂದು ವಾರದಿಂದ ಕೋವಿಡ್ ಸೋಂಕು ಉಲ್ಬಣಿಸಿದ್ದು, ಮಾಸ್ಕ್ ಧರಿಸುವ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಸೂಚಿಸಿದರು ಹಾಗೂ ಸಾರ್ವಜನಿಕರಲ್ಲಿ ಲಸಿಕೆ ಹಾಕಿಸಿಕೊಳ್ಳುವ ಬಗ್ಗೆ ಹೆಚ್ಚಿನ ಪ್ರಚಾರ ಕೈಗೊಂಡು ಅರಿವು ಮೂಡಿಸುವಂತೆ ಸೂಚಿಸಿದರು.

- **ಇನ್ನಿತರ ಸಮಸ್ಯೆಗಳ ಬಗ್ಗೆ:**
  - ವೆಂಕಟರಾಜು ರವರು ಮಾತನಾಡಿ ಹೊಯ್ಸಳನಗರದಲ್ಲಿ ಬೀದಿದೀಪ ಉರಿಯುತ್ತಿಲ್ಲ. ಇದ್ದರಿಂದ ನಾಗರೀಕರಿಗೆ ಓಡಾಡಲು ತೊಂದರೆಯಾಗಿರುತ್ತದೆ ಈ ಬಗ್ಗೆ ಕ್ರಮವಹಿಸಲು ಕೋರಿದರು.
    - ಈ ಬಗ್ಗೆ ನೋಡಲ್ ಅಧಿಕಾರಿ ರವರು ಪ್ರತಿಕ್ರಿಯಿಸಿ ಸಂಬಂಧಪಟ್ಟವರಿಗೆ ದುರಸ್ಥಿಪಡಿಸಲು ಸೂಚಿಸಲಾಗುವುದೆಂದು ತಿಳಿಸಿದರು.

- ವೆಂಕಟರಾಜು ರವರು ಮಾತನಾಡಿ ಹೊಯ್ಸಳನಗರದಲ್ಲಿ ಕಾವೇರಿ ನೀರು ಸರಿಯಾ ಬರುತ್ತಿಲ್ಲವಾದ್ದರಿಂದ ವಾರದಲ್ಲಿ 2 ದಿನ ಸಮರ್ಪಕವಾಗಿ ಸರಬರಾಜು ಮಾಡುವಂತೆ ಸಂಬಂಧಪಟ್ಟವರಿಗೆ ಸೂಚಿಸಬೇಕೆಂದು ಕೋರಿದರು.
    - ಈ ಬಗ್ಗೆ ನೋಡಲ್ ಅಧಿಕಾರಿ ರವರು ಪ್ರತಿಕ್ರಿಯಿಸಿ ಸಂಬಂಧಪಟ್ಟವರ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಗುವುದೆಂದು ತಿಳಿಸಿದರು.
- ವೆಂಕಟರಾಜು ರವರು ಮಾತನಾಡಿ ಲಕ್ಷ್ಮಣನಗರದ 9ನೇ ಮುಖ್ಯರಸ್ತೆ, ವಿನಾಯಕ ದೇವಸ್ಥಾನದ ಬಳಿ ಇರುವ ತೆರೆದ ಮಳೆನೀರುಗಾಲುವೆಯಲ್ಲಿ ಕಸವನ್ನು ಸುರಿಯುತ್ತಿದ್ದು, ಚೈನ್ ಲಿಂಕ್ ಫೆನ್ಸಿಂಗ್ ಅಳವಡಿಸಿಕೊಡಬೇಕೆಂದು ಕೋರಿದರು.
    - ಈ ಬಗ್ಗೆ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಡಿ.ಎಸ್.ಮಂಜುನಾಥ್ ರವರು ಮಾತನಾಡಿ, ಚೈನ್ ಲಿಂಕ್ ಫೆನ್ಸಿಂಗ್ ಅಳವಡಿಸಲು ಅನುದಾನ ಅಲಭ್ಯವಾಗಿರುತ್ತದೆ. ಸದರಿ ಪ್ರದೇಶದಲ್ಲಿ ಸಿ.ಸಿ.ಕ್ಯಾಮೆರಾಗಳನ್ನು ಅಳವಡಿಸಿ, ಕಸ ಸುರಿಯುವವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಸಿ.ಸಿ. ಕ್ಯಾಮೆರಾ ಅಳವಡಿಸುವ ಕಾಮಗಾರಿಯು ಟೆಂಡರ್ ಪ್ರಕ್ರಿಯೆಯಲ್ಲಿದ್ದು, ಕಾರ್ಯಾದೇಶ ಪಡೆದು ಈ ಬಗ್ಗೆ ಕ್ರಮ ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

<u>BBMP SAHAYA APP:</u>

- ಡಿ.ಎಸ್.ಮಂಜುನಾಥ್ ಸಹಾಯಕ ಅಭಿಯಂತರರು, ವಾರ್ಡ್ ನಂ.71 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.
- ಸುರೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಯಾವುದೇ ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

➢ ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಡಿ.ಎಸ್.ಮಂಜುನಾಥ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸದಸ್ಯ ಕಾರ್ಯದರ್ಶಿ–ವಾರ್ಡ್ 71 ಹಾಗೂ<br>ಸಹಾಯಕ ಅಭಿಯಂತರರು, | (ಬಿ.ಆರ್ ರವಿಕುಮಾರ್)<br>ನೋಡಲ್ ಅಧಿಕಾರಿ ವಾರ್ಡ್–71 |

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರರವರ ಆದ್ಯ ಗಮನಕ್ಕೆ ತರಲಾಗಿದೆ.
2) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
8) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
9) ಕಛೇರಿ ಕಡತಕ್ಕೆ